ದಿನಾಂಕ 22-07-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಾದಿ ಪರ ಶ್ರೀ. ಹೆಚ್.ಬಿ. ವಕೀಲರಿಂದ

ನನ್ನ ಮುಖ್ಯ ವಿಚಾರಣೆ ಭಾಗವಾಗಿ ಪ್ರಮಾಣ ಪತ್ರದ ಮೂಲಕ ನ್ಯಾಯಾಲಯದ ಮುಂದೆ ಸಲ್ಲಿಸಿರುತ್ತೇನೆ. ಸದರಿ, ಪ್ರಮಾಣ ಪತ್ರದಲ್ಲಿ ಬರೆದಿರುವ ವಿಷಯಗಳು ನಾನೇ ಬರೆಸಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಹೇಳಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದೇ.

ಈ ದಿನ ನಾನು ನನ್ನ ದಾವೆಗೆ ಸಂಬಂಧಿಸಿದಂತೆ, ದಿ: 27-08-2018 ರಂದು ಶ್ರೀ. ಎನ್. ಶಿವನಾಗಪ್ಪ ತಂ. ಷಡಕ್ಷರಪ್ಪ ಇವರು ನನ್ನ ಪರವಾಗಿ ಬರೆದುಕೊಟ್ಟ ನೊಂದಾಯಿತ ಖರೀದಿ ಪತ್ರದ ದೃಢೀಕೃತ ಪ್ರತಿ ಹಾಜರುಪಡಿಸಿದ್ದು, ಅದನ್ನು ನಿ.ಪಿ. 1 ಎಂದು ಗುರುತಿಸಲಾಯಿತು.

ದಿ: 12-01-2024 ರ ಕಟ್ಟಡ ಪರವಾನಿಗೆ ಪತ್ರದ ದೃಢೀಕೃತ ಪ್ರತಿ ಹಾಜರುಪಡಿಸಿದ್ದು, ಅದನ್ನು ನಿ.ಪಿ. 2 ಎಂದು ಗುರುತಿಸಲಾಯಿತು.

ದಾವಾ ಆಸ್ತಿಯ ನೀಲಿ ನಕಾಶೆಯ ದೃಢೀಕೃತ ಪ್ರತಿ ಹಾಜರುಪಡಿಸಿದ್ದು, ಅದನ್ನು ನಿ.ಪಿ. 3 ಎಂದು ಗುರುತಿಸಲಾಯಿತು.

ದಿ: 09-01-2019 ಮತ್ತು ದಿ: 02-02-2023 ರ ನಮೂನೆ 2 ರ 2 ದೃಢೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿ.ಪಿ. 4 ಮತ್ತು 5 ಎಂದು ಗುರುತಿಸಲಾಯಿತು.

ದಾವಾ ಆಸ್ತಿಗೆ ಸಂಬಂಧಿಸಿದಂತೆ ದಿ: 01-04-2004 ರಿಂದ 12-03-2024 ರವರೆಗಿನ ಋಣಭಾರರಾಹಿತ್ಯ ಪ್ರಮಾಣ ಪತ್ರದ ದೃಢೀಕೃತ ಪ್ರತಿ ಹಾಜರುಪಡಿಸಿದ್ದು, ಅದನ್ನು ನಿ.ಪಿ. 6 ಎಂದು ಗುರುತಿಸಲಾಯಿತು.

ದಿ: 05-07-2024 ರಂದು ನಗರಸಭೆ ಕಾರ್ಯಾಲಯ ಸಿಂಧನೂರು ಇವರು ನೀಡಿದ ಸೂಚನಾ ಪತ್ರ ಹಾಜರುಪಡಿಸಿದ್ದು, ಅದನ್ನು ನಿ.ಪಿ. 7 ಎಂದು ಗುರುತಿಸಲಾಯಿತು.

ಪಾಟೀ ಸವಾಲು : ಶ್ರೀ. ವಕೀಲರಿಂದ

ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀ ಸವಾಲು ಮಾಡಲು ಕಾಲಾವಕಾಶ ಕೋರಿದ್ದು, ಅನುಮತಿಸಲಾಯಿತು.

(ನನ್ನ ಉಕ್ತದ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿರುತ್ತಾರೆ)

ಓ. ಹೇ. ಕೇ. ಸರಿ ಇದೆ,

1 ನೇ ಹೆಚ್ಚುವರಿ ಸಿಜೆ & ಜೆಎಂಎಫ್‌ಸಿ, ನ್ಯಾಯಾಲಯ,
ಸಿಂಧನೂರು.